**ಕರ್ನಾಟಕ ಸರ್ಕಾರ**

ಇ-ಕಛೇರಿ ಸಂ: ಇಡಿ 184 ಯುಬಿವಿ 2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:29.06.2021

**ಇಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು

**ಇವರಿಗೆ:**

ಕುಲಸಚಿವರು,
ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.

ಮಾನ್ಯರೇ,

ವಿಷಯ: **ಬೆಂಗಳೂರು ನಗರ ವಿಶ್ವವಿದ್ಯಾಲಯದ ವ್ಯಾಪ್ತಿಯ ಆರ್.ಜಿ.ಎಸ್.ಪ್ರಥಮ ದರ್ಜೆ ಕಾಲೇಜು ಇಲ್ಲಿ ಅಸ್ತಿತ್ವದಲ್ಲಿರುವ ವಿವಿಧ ವ್ಯಾಸಂಗಕ್ರಮಗಳ ಶಾಶ್ವತ ಸಂಯೋಜನೆಯನ್ನು 2020-21ನೇ ಸಾಲಿನಿಂದ ನವೀಕರಿಸುವ ಬಗ್ಗೆ**

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021
2. ತಮ್ಮ ಪತ್ರ ಸಂಖ್ಯೆ: ಬೆ.ಕೇ.ವಿ/ಕು.ಸ./ಕಾ:ಹೊಕೋಪ್ರ/2/2020-21, ದಿನಾಂಕ:27.04.2021

*****

ಆರ್.ಜಿ.ಎಸ್.ಪ್ರಥಮ ದರ್ಜೆ ಕಾಲೇಜು, 16ನೇ ಮುಖ್ಯರಸ್ತೆ, 3ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-560 034 ಇಲ್ಲಿ ಅಸ್ತಿತ್ವದಲ್ಲಿರುವ ಹಲವು ವ್ಯಾಸಂಗಕ್ರಮಗಳ ಶಾಶ್ವತ ಸಂಯೋಜನೆಯನ್ನು 2020-21ನೇ ಸಾಲಿನಿಂದ ನವೀಕರಿಸುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ ಪ್ರಕರಣ 59(11) ಜೊತೆಯಲ್ಲಿ ಓದಲಾದ 62(1)ರಡಿ ಅವಶ್ಯಕವಾದ ಸರ್ಕಾರದ ಶಿಫಾರಸ್ಸು ಕೋರಿ, ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ, ಆನ್‌ಲೈನ್ ತಂತ್ರಾಂಶದಲ್ಲಿ ಅಳವಡಿಸಿರುವ ಪ್ರಪತ್ರಗಳಲ್ಲಿ ಉಲ್ಲೇಖ(2)ರ ಪತ್ರದನ್ವಯ ಸಲ್ಲಿಸಲಾಗಿರುವ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು ಪೂರ್ವಪ್ರಸ್ತಾಪಿತ ಶಾಶ್ವತ ಸಂಯೋಜನೆ ನವೀಕರಣ ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ತತ್ಪರಿಣಾಮವಾಗಿ, ದಿನಾಂಕ:20.02.2019ರಲ್ಲಿ ಮುಕ್ತಾಯಗೊಂಡಿರುವ ನ್ಯಾಕ್ ಮಾನ್ಯತೆಯನ್ನು ಕಡ್ಡಾಯವಾಗಿ ಮುನರ್‌ಪಡೆಯುವ ಕಟ್ಟುನಿಟ್ಟಿನ ನಿಬಂಧನೆಯನ್ನು ವಿಧಿಸಿ, ಆರ್.ಜೆ.ಎಸ್.ಪ್ರಥಮ ದರ್ಜೆ ಕಾಲೇಜು, 16ನೇ ಮುಖ್ಯರಸ್ತೆ, 3ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-560 034 ಇಲ್ಲಿ ಅಸ್ತಿತ್ವದಲ್ಲಿರುವ ಈ ಕೆಳಕಂಡ ವ್ಯಾಸಂಗಕ್ರಮಗಳ ಶಾಶ್ವತ ಸಂಯೋಜನೆಯನ್ನು ಅವುಗಳ ಮುಂದೆ ತೋರಿಸಿರುವ ವಿದ್ಯಾರ್ಥಿ ಪ್ರಮಾಣಗಳಿಗೆ ಅನ್ವಯಿಸುವಂತೆ 2020-21ನೇ ಸಾಲಿನಿಂದ 4 ವರ್ಷಗಳ ಅವಧಿಗೆ ನವೀಕರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ ಪ್ರಕರಣ 59(11) ಜೊತೆಯಲ್ಲಿ ಓದಲಾದ 62(1)ರನ್ವಯ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ವ್ಯಾಸಂಗಕ್ರಮ | ವಿಷಯಸಮೂಹ | ವಿದ್ಯಾರ್ಥಿಪ್ರಮಾಣ |
|---|---|---|
| ಬಿ.ಸಿ.ಎ. | ವಿ.ವಿ.ಪರಿನಿಯಮಾವಳಿಗಳಂತೆ | 80(ಎಂಭತ್ತು) |
| ಬಿ.ಕಾಂ. | ವಿ.ವಿ.ಪರಿನಿಯಮಾವಳಿಗಳಂತೆ | 210(ಇನ್ನೂರ ಹತ್ತು) |
| ಬಿ.ಎಸ್ಸಿ. | BcGenBt | 70(ಎಪ್ಪತ್ತು) |
| ಬಿ.ಎಸ್ಸಿ. | PMCs | 60(ಅರವತ್ತು) |

ಆರ್.ಜೆ.ಎಸ್.ಪ್ರಥಮ ದರ್ಜೆ ಕಾಲೇಜಿಗೆ 2020-21ನೇ ಶೈಕ್ಷಣಿಕ ಸಾಲಿನಿಂದ ಪೂರ್ವಪ್ರಸ್ತಾಪಿತ ಶಾಶ್ವತ ಸಂಯೋಜನೆ ನವೀಕರಣವನ್ನು ಮಂಜೂರು ಮಾಡುವುದು ಸ್ಥಳೀಯ ವಿಚಾರಣೆ ಸಮಿತಿಯ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1 ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2 ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4 ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

6 ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

7 ದಿನಾಂಕ: 13-8-1997 ರಂದು ವಿಶಾಖ V/S ರಾಜಸ್ಥಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

9 ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10 ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ

(ಮಹೇಶ್ ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2)
29/06/2021

ಪ್ರತಿ:

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001

2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು

3. ಪ್ರಾಂಶುಪಾಲರು, ಆರ್.ಜೆ.ಎಸ್.ಪ್ರಥಮ ದರ್ಜೆ ಕಾಲೇಜು, 16ನೇ ಮುಖ್ಯರಸ್ತೆ, 3ನೇ ಬ್ಲಾಕ್, ಕೋರಮಂಗಲ, ಬೆಂಗಳೂರು-560 034